ಅ) ಕುಂದಾಪುರ ತಾಲ್ಲೂಕಿನಲ್ಲಿ ಕಲ್ಲುಗಳು (ಕೆಂಪು ಮತ್ತು ಶಿಲೆ) ಮತ್ತು ಮರಳಿಗೆ ವಿವಿಧ ಉದ್ದೇಶಗಳಿಗೆ ಪರವಾನಿಗೆ ಪಡೆದವರ ಒಟ್ಟು ಸಂಖ್ಯೆ ಎಷ್ಟು?

(ಹೆಸರು ಮತ್ತು ಸಂಪೂರ್ಣ ವಿಳಾಸ ಹಾಗೂ ಗ್ರಾಮ ಮತ್ತು ವಿಸ್ತೀರ್ಣವನ್ನು ತಿಳಿಸುವುದು)

ಶ್ರೀ ಎನ್.ಡಿ. ಜಯರಾಮ್ (ಗಣಿ ಮತ್ತು ಭೂವಿಜ್ಞಾನ ಸಚಿವರು) :-

ಅ) ಇಲ್ಲ, ಕುಂದಾಪುರ ತಾಲ್ಲೂಕಿನಲ್ಲಿ ಕಲ್ಲು ಮತ್ತು ಮರಳಿಗೆ ಪರವಾನಿಗೆ ಕೊಟ್ಟಿರುವುದಿಲ್ಲ.

ವಿಷಯ :- ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ದಕ್ಷಿಣ ಜಿಲ್ಲೆಯಲ್ಲಿ ಪಡೆದ ಪರವಾನಿಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 2373 (3037)

ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) :- ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಕಳೆದ ಎರಡು ವರ್ಷಗಳಿಂದ ಕೊಟ್ಟ ಪರವಾನಿಗೆಗಳ ಸಂಖ್ಯೆ ಎಷ್ಟು?

(ತಾಲ್ಲೂಕುವಾರು ವಿವರ ಒದಗಿಸುವುದು)

ಆ) ಉಡುಪಿ ಕುಂದಾಪುರ ತಾಲ್ಲೂಕಿನಲ್ಲಿ ಈಗ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಪರವಾನಿಗೆ ಹೊಂದಿರುವವರ ಸಂಪೂರ್ಣ ವಿಳಾಸ ಹೊಂದಿರುವ ಗ್ರಾಮ ಮತ್ತು ವಿಸ್ತೀರ್ಣದ ವಿವರ ಒದಗಿಸುವುದು.

ಶ್ರೀ. ಜಯರಾಮ್ (ಗಣಿ ಮತ್ತು ಭೂವಿಜ್ಞಾನ ಸಚಿವರು) :-

ಅ) ಇಲ್ಲ,

ಆ) ಉದ್ಭವಿಸುವುದಿಲ್ಲ.

ವಿಷಯ :- ಉಡುಪಿಯಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ ಪ್ರಾರಂಭ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 2374 (3038)

ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ)

ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯ (ಉಡುಪಿ) ಆವರ್ಸೆ ಮತ್ತು (ಕುಂದಾಪುರ) ಅಲವಾಡೆ (ಅರ್ಡಿ) ಗ್ರಾಮದಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ ಪ್ರಾರಂಭಿಸುವ ಯೋಜನೆ ಸರ್ಕಾರದ ಮುಂದೆ ಇದೆಯೇ?